**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ**

**ಸ್ಪೆಷಲ್ ಕೇಸ್ ನಂ. 3/2010**

**ದೋ.ಸಾ. : 74 ಪ್ರಾ.ಸಾ. : 29**

ಸಾಕ್ಷಿಯ ಹೆಸರು : ಆನಂದು ಜಟ್ಟಿ ದೊಡಮನಿ
ತಂದೆಯ ಹೆಸರು : ಜಟ್ಟಿ ದೊಡಮನಿ
ವಯಸ್ಸು : 55 ವರ್ಷ
ಉದ್ಯೋಗ : ಕೃಷಿ
ವಾಸ : ಕಾನಗೋಡ ಗ್ರಾಮ.

**ದಿನಾಂಕಃ 27-09-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದ**

1. ನಾನು ಹುಟ್ಟಿದಾಗಿನಿಂದ ಕಾನಗೋಡು ಗ್ರಾಮದಲ್ಲಿ ವಾಸ ಇದ್ದೇನೆ. ನ್ಯಾಯಾಲಯದಲ್ಲಿರುವ ಆರೋಪಿ ಪರಿಚಯ ನನಗೆ ಇದೆ. ಆರೋಪಿ ನಮ್ಮ ಗ್ರಾಮದಲ್ಲಿ ಹಿಂದೆ ಗ್ರಾಮ ಪಂಚಾಯತಿ ಅಧ್ಯಕ್ಷರು ಆಗಿದ್ದರು. 2001-02 ರಲ್ಲಿ ಸ್ವಚ್ಛ ಗ್ರಾಮ ಯೋಜನೆ ಅಡಿಯಲ್ಲಿ ಕಾನಗೋಡು ಗ್ರಾಮ ಪಂಚಾಯತಿಗೆ ರೂ.20 ಲಕ್ಷ ಅನ್ನು ಮಂಜೂರು ಮಾಡಿದ್ದರು. ಆ ಬಗ್ಗೆ 210 ಫಲಾನುಭವಿಗಳನ್ನು ಗುರುತಿಸಿದ್ದರು ಅದರಲ್ಲಿ ನಾನು ಸಹ ಒಬ್ಬ ಫಲಾನುಭವಿ ಆಗಿದ್ದೆ. ಆ ಯೋಜನೆ ಅಡಿಯಲ್ಲಿ ಪ್ರತಿ ಫಲಾನುಭವಿಗಳಿಗೆ ತಲಾ ರೂ.3000/- ಸಹಾಯಧನ ನೀಡಬೇಕಿತ್ತು. ಆದರೆ ನನಗೆ ಆ ರೀತಿ ಸಹಾಯ ಧನ ನೀಡಿರುವುದಿಲ್ಲ. ಆದರೆ ಶೌಚಾಲಯವನ್ನು ನನ್ನ ಮನೆಗೆ ನಿರ್ಮಾಣ ಮಾಡಿಕೊಟ್ಟಿದ್ದರು. ಪೊಲೀಸನವರು ನನ್ನನ್ನು ಈ ಪ್ರಕರಣದ ಬಗ್ಗೆ ವಿಚಾರಣೆ ಮಾಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ವಿಶೇಷ ಸರಕಾರಿ ಅಭಿಯೋಜಕರಿಂದ**

2. ಆ ಯೋಜನೆ ಅಡಿಯಲ್ಲಿ ಶೌಚಾಲಯವನ್ನು ಗ್ರಾಮ ಪಂಚಾಯತಿಯಿಂದ ನನಗೆ ನಿರ್ಮಿಸಿಕೊಟ್ಟಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ದಿನಾಂಕ

11.09.2005 ರಂದು ಕಾರವಾರದ ಲೋಕಾಯುಕ್ತ ಆರಕ್ಷಕ ನಿರೀಕ್ಷಕರ ಮುಂದೆ ಹೇಳಿಕೆ ನೀಡಿ ನನಗೆ ಶೌಚಾಲಯವನ್ನು ಕಟ್ಟಿಸಿಕೊಟ್ಟಿಲ್ಲ ಎಂದು ಹೇಳಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯಲ್ಲಿ ಪೊಲೀಸನವರ ಮುಂದೆ ನನಗೆ ರೂ.3000/- ಅನ್ನು ಸಹ ನೀಡಿಲ್ಲ ಎಂದು ಹೇಳಿಕೆ ನೀಡಿದ್ದೇನೆ ಎಂದರೆ ನಾನು ಪೊಲೀಸನವರಿಗೆ ಹೇಳಿಕೆ ನೀಡಿಲ್ಲ. ಸದರಿ ಹೇಳಿಕೆಯನ್ನು ನಿಪಿ-64 ಎಂದು ಗುರುತಿಸಲಾಯಿತು. ಈ ದಿನ 7 ಜನ ನಾವು ಸಾಕ್ಷಿಗಳು ಊರಿನಿಂದ ಬಂದಿದ್ದೇವೆ. ಅವರೆಲ್ಲರೂ ನನಗೆ ಗೊತ್ತಿದ್ದಾರೆ. ಆರೋಪಿಗೆ ಸಹಾಯ ಮಾಡಲು ನಾನು ಶೌಚಾಲಯ ಕಟ್ಟಿಕೊಟ್ಟಿದ್ದಾರೆ ಎಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಜಿ ಟಿ ಎನ್ ರವರಿಂದಃ-**

3. ನನಗೆ ಶೌಚಾಲಯ ನಿರ್ಮಾಣ ಮಾಡಿಕೊಳ್ಳಲು ರೂ.3000/- ಸಹಾಯಧನ ಕೊಟ್ಟಿಲ್ಲ ಎಂದು ಸುಳ್ಳು ಹೇಳಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ - ಇಲ್ಲ -**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ